# ಸಹ್ಯಾದ್ರಿ: ಅಪ್ರೆಂಟಿಸ್‌ಶಿಪ್ ಮೇಳ




ಸಹ್ಯಾದ್ರಿ ಕ್ಯಾಂಪಸ್‌ನಲ್ಲಿ ನಡೆದ ಅಪ್ರೆಂಟಿಸ್‌ಶಿಪ್ ಮೇಳದಲ್ಲಿ ಗಣ್ಯರು ಮಾತನಾಡಿದರು.

**ಮಹಾನಗರ,** ಜು. 29: ಸಹ್ಯಾದ್ರಿ ಕಾಲೇಜ್ ಆಫ್ ಎಂಜಿನಿಯರಿಂಗ್ ಮತ್ತು ಮ್ಯಾನೇಜ್‌ಮೆಂಟ್ ಸಹಯೋಗದೊಂದಿಗೆ ಬೆಂಗಳೂರಿನ ಚೆನ್ನೈ ಮತ್ತು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೋರ್ಡ್ ಆಫ್ ಅಪ್ರೆಂಟಿಸ್‌ಶಿಪ್ ತರಬೇತಿ ವತಿಯಿಂದ ಸಹ್ಯಾದ್ರಿ ಕ್ಯಾಂಪಸ್‌ನಲ್ಲಿ ಅಪ್ರೆಂಟಿಸ್ ಶಿಪ್ ಮೇಳವನ್ನು ಆಯೋಜಿಸಿತು. 400 ಪದವೀಧರರು / ಡಿಪ್ಲೊಮಾ / ಎಂಜಿನಿಯರಿಂಗ್ ಪದವೀಧರರು ಭಾಗವಹಿಸಿದರು.

ಸಹ್ಯಾದ್ರಿ ಕಾಲೇಜಿನ ಅಧ್ಯಕ್ಷ ಮಂಜುನಾಥ ಭಂಡಾರಿ ಮಾತನಾಡಿ, ಅವಕಾಶವನ್ನು ವಿದ್ಯಾರ್ಥಿಗಳು ತಮ್ಮದಾಗಿಸಿಕೊಳ್ಳಬೇಕು ಎಂದರು.

ಬೋಟ್ ಇದರ ಉಸ್ತುವಾರಿ ಸಹಾಯಕ ನಿರ್ದೇಶಕ ವಿ.ಎಸ್. ಪಾಂಡೆ, ಬೆಂಗಳೂರಿನ ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ದಿಲೀಪ್, ಎಚ್‌ಆರ್ ಕೆಐಒಸಿಎಲ್ ಲಿಮಿಟೆಡ್‌ನ ಜಿಎಂ ಎಸ್. ರಾಜೇಂದ್ರ, ಪ್ರಾಂಶುಪಾಲ ಶ್ರೀನಿವಾಸ ರಾವ್ ಕುಂಟೆ ಉಪಸ್ಥಿತರಿದ್ದರು.